**ದಿನಾಂಕ : *17-10-2025* ರಂದು ಸಾಕ್ಷಿಗೆ ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.**
**ಮುಖ್ಯ ವಿಚಾರಣೆ: ಅರ್ಜಿದಾರರ ಪರವಾಗಿ ಶ್ರೀ. ಆರ್ ಬಿ ಬಿ ವಕೀಲರಿಂದ**

ನಾನು ಈ ದಿನ ನನ್ನ ಮುಖ್ಯ ವಿಚಾರಣೆ ಪ್ರಮಾಣ ಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರುವ ಸಂಗತಿಗಳು ನಿಜ ಇದ್ದು, ನಾನೇ ಹೇಳಿ ಬರೆಸಿದ್ದು, ಅದರಲ್ಲಿನ ಸಹಿಗಳು ನನ್ನದೇ ಇರುತ್ತವೆ.

ಮದ್ಯಂತರ ಅರ್ಜಿ ನಂ.1 ರಲ್ಲಿ ಕೋರಿರುವಂತೆ ಆದೇಶ ಮಾಡಬೇಕೆಂದು ಕೋರುತ್ತೇನೆ.

**ಪಾಟೀ ಸವಾಲು : 2 ನೇ ಎದುರುದಾರರ ಪರವಾಗಿ ಶ್ರೀ ಎಮ್ ಎಸ್ ಹೆಚ್ ವಕೀಲರಿಂದ**

ನನ್ನ ತಾಯಿ ತೀರಿಕೊಂಡಿದ್ದರಿಂದ ಪರಿಹಾರದ ಹಣದಸಲುವಾಗಿ ಮಾನ್ಯ ನ್ಯಾಯಾಲಯಕ್ಕೆ ಬಂದಿರುತ್ತೇನೆ. ನಾನು ಜೀವನೋಪಾಯಕ್ಕಾಗಿ ಹುನಗುಂದ ಪಟ್ಟಣವನ್ನು ಬಿಟ್ಟು ಹೋಗಿರುತ್ತೇನೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಅಪಘಾತವಾದ 3 ತಿಂಗಳೊಳಗಾಗಿ ಪೋಲಿಸರು ಅಂತಿಮ ವರದಿಯನ್ನು ಸಲ್ಲಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ನನ್ನ ಅರ್ಜಿಯಲ್ಲಿ ವಿಳಂಬಕ್ಕೆ ಸಮಂಜಸವಾದ ಕಾರಣಗಳನ್ನು ನಮೂದಿಸಿರುವುದಿಲ್ಲ ಎಂದರೆ ಸರಿಯಲ್ಲ. ಕೋವಿಡ್ ಕಾರಣದಿಂದ ತಡವಾಗಿದೆ ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಕೋವಿಡ್ ಕ್ಕಿಂತ ಮೊದಲು ಅಪಘಾತ ಆಗಿರುತ್ತದೆ ಎಂದರೆ ಸರಿ. ನಾನು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀ ಸವಾಲು : 1 ನೇಎದುರುದಾರರನ್ನು ಮತ್ತು ಅವರ ಪರ ವಕೀಲರನ್ನು ಕೂಗಿ ಕರೆಯಿಸಲಾಯಿತು. ಅವರು ಗೈರು ಹಾಜರಾಗಿದ್ದರಿಂದ ಪಾಟೀ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**ಮರು ವಿಚಾರಣೆ ಇಲ್ಲ**

( ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಿದೆ )

ಓ. ಹೇ. ಕೇ. ಸರಿ ಅದೆ.

ಹಿರಿಯ ದಿವಾಣಿ ನ್ಯಾಯಾಧೀಶರು,
ಹಾಗೂ ಜೆ.ಎಮ್.ಎಫ್.ಸಿ, ಹುನಗುಂದ.